ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಆರೋಗ್ಯ ಕರ್ನಾಟಕ ಆಯುಷ್ಮಾನ್ ಯೋಜನೆಗಳ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

963 (1175) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಕರ್ನಾಟಕ ಆಯುಷ್ಮಾನ್ ಯೋಜನೆಯಡಿ ರಾಜ್ಯದಲ್ಲಿ ಎಷ್ಟು ಕಾರ್ಡ್‌ಗಳನ್ನು ವಿತರಿಸಲಾಗಿದೆ ; ಸರ್ಕಾರಿ ಆಸ್ಪತ್ರೆಗಳಿಂದ "ರೆಫರಲ್" ಪಡೆಯದೆ ನೇರವಾಗಿ ಖಾಸಗಿ ಆಸ್ಪತ್ರೆಗಳಿಗೆ ದಾಖಲಾದವರಿಗೆ ಈ ಯೋಜನೆ ಅನ್ವಯ ಸವಲತ್ತು ನಿರಾಕರಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಕೆಲವು ಚಿಕಿತ್ಸೆಗಳು ಇರುವುದಿಲ್ಲ ಎಂದು ಖಾಸಗಿ ಆಸ್ಪತ್ರೆಗಳು ಚಿಕಿತ್ಸೆಗೆ ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) 2018-19 ಮತ್ತು 2019-20ರಲ್ಲಿ ಆರೋಗ್ಯ ಕರ್ನಾಟಕ ಚಿಕಿತ್ಸೆಗಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಆರೋಗ್ಯ ಕರ್ನಾಟಕ ಕಾರ್ಡ್‌ಗಳನ್ನು ವಿತರಿಸಲಾಗಿದೆ ; ವಿತರಿಸಬೇಕಾದ ಕಾರ್ಡ್‌ಗಳು ಎಷ್ಟು ? (ವಿವರ ನೀಡುವುದು)